ತುಮಕೂರು ಡಿಸ್ಟ್ರಿಕ್ಟ್.

ನೋಟಿಸ್.

ತಾರೀಖು 28ನೇ ಆಕ್ಟೋಬರ್ 1896.

ಮೈಸೂರ ಗವರ್ಮೆಂಟ್ ತುಮಕೂರು ಡಿಸ್ಟ್ರಿಕ್ಟ್ ಸೇವಿಂಗ್ಸ್ ಬ್ಯಾಂಕ್ ಡಿಪಾಜಿಟರ್‌ಗಳು ತಮ್ಮ ತಮ್ಮ ಸೇವಿಂಗ್ಸ್ ಬ್ಯಾಂಕ್ ಪ್ಯಾಸ್ ಬುಕ್ಕುಗಳನ್ನು 1895—96ನೇ ಇಸವಿಯ ಬಡ್ಡಿ ಮೊಬಲಗನ್ನು ದಾಖಲ್ಮಾಡುವದಕ್ಕೋಸ್ಕರ ಈ ಆಪೀಸಿಗೆ ಕಳುಹಿಸಿ ಕೊಡಬೇಕಾಗಿ ಕೇಳಿಕೊಳ್ಳಲ್ಪಟ್ಟಿದೆ.

ಟಿ. ಮಿರ್ಜಮುಲುದ್ದೀನ್ ಅಲಿಖಾನ್,
ಟ್ರೆಜರಿ ಆಫಿಸರ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜಿಯವರ ಕೋರ್ಟಿನಲ್ಲಿ.

ಸ್ಯ 1896—97ನೇ ಇಸವಿ ಅರ್ಜೀ ನಂಬರ್ 130.

ಮೃತಪಟ್ಟ ಶಿವಾಚಾರದ ಜಂಗಮ ನಿಂಗಣಯ್ಯನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಚನ್ನಪ್ಪಯ್ಯ, ಈರಣಯ್ಯ ಇವರಲ್ಲಿ ಮೃತಪಟ್ಟ ಸದರೀ ನಿಂಗಣಯ್ಯನವರಿಗೆ ಮಕ್ಕಳು ಆಗಬೇಕೆಂಬ ಹಕ್ಕುದಾರಿ ಮೇಲೆ ಅರಕಲಗೂಡು ತಾಲ್ಲೂಕು ಮಲ್ಲಪಟ್ಟಣದ ಹೋಬಳಿ ನಿಲಕುಂದದ ಗ್ರಾಮದ ಸ್ಥಳದ ಸದರೀ ಚನ್ನಪ್ಪಯ್ಯ, ಈರಣಯ್ಯ ಇವರು ಸದರೀ ವಾಸಸ್ಥರಾಗಿ ಮೃತಪಟ್ಟ ನಿಂಗಣಯ್ಯನವರ ಜಿಂದಗಿ ಬಗ್ಯಾಗಿ ಬರತಕ್ಕ 1,000 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ಯ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಚನ್ನಪ್ಪಯ್ಯ, ಈರಣಯ್ಯ ಇವರ ಅರ್ಜಿಯನ್ನು 1896ನೇ ಇಸವಿ ನವೆಂಬರ್ ತಿಂಗಳ ತಾರೀಖು 27ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನಿಂಗಣಯ್ಯನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1896—97ನೇ ಇಸವಿ ಅರ್ಜೀ ನಂಬರ್ 131.

ಮೃತಪಟ್ಟ ದೊಡ್ಡೇಗೌಡರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಕೆಂಪಮ್ಮ, ಮೃತಪಟ್ಟ ಸದರೀ ದೊಡ್ಡೇಗೌಡರಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇಲೆ ನಾಗಮಂಗಲದ ತಾಲ್ಲೂಕು ನೆಲ್ಲಿಗೆರೆ ಹೋಬಳಿ ಚೀರಹಳ್ಳಿ ಗ್ರಾಮ ಸ್ಥಳದ ಸದರೀ ಕೆಂಪಮ್ಮನವರು, ಶ್ರೀರಂಗಪಟ್ಟಣದ ತಾಲ್ಲೂಕು ದೊಡೇಗೌಡನ ಕೊಪ್ಪಲ್ ವಾಸಸ್ಥರಾಗಿ ಮೃತಪಟ್ಟ ದೊಡ್ಡೇಗೌಡರ ಜಿಂದಗಿ ಬಗ್ಯಾಗಿ ಬರತಕ್ಕ 1,000 ರೂಪಾಯಿ ಸಾಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಕೆಂಪಮ್ಮನವರ ಅರ್ಜಿಯನ್ನು ಸ್ಯ 1896ನೇ ಇಸವಿ ನವೆಂಬರ್ ತಿಂಗಳ ತಾರೀಖು 27ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯು ವಿಮರ್ಶೆಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ದೊಡ್ಡೆಗವುಡರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ಯ 1896—97ನೇ ಇಸವಿ ಅರ್ಜೀ ನಂಬರ್ 133.

ಮೃತಪಟ್ಟ ಜಾರ್ ಮಹಮ್ಮದ್ ಕೇಟರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಶಿಲೇರ್ಮಾತಯ್ಯಖ್ಖ್ ಕೇಟರು, ಮೃತಪಟ್ಟ ಸದರೀ ಜಾರ್‌ಮಹಮ್ಮದ್ ಕೇಟರಿಗೆ ಸಹೋದರ ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ಕಂಟೋನ್ಮೆಂಟ್ ಸ್ಥಳದ ಸದರೀ ಶಿಲೇರ್ಮಾತಯ್ಯಖ್ಖ್ ಕೇಟರು, ಹಾಸನದ ವಾಸಸ್ಥರಾಗಿ ಮೃತಪಟ್ಟ ಜಾರ್ ಮಹಮ್ಮದ್ ಕೇಟರ ಜಿಂದಗಿ ಬಗ್ಯಾಗಿ ಬರತಕ್ಕ 5,000 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ಯ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಶಿಲೇರ್ಮಾತಯ್ಯಖ್ಖ್ ಕೇಟರ ಅರ್ಜಿಯನ್ನು ಸ್ಯ 1896ನೇ ಇಸವಿ ನವೆಂಬರ್ ತಿಂಗಳ ತಾರೀಖು 27ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಜಾರ್‌ಮಹಮ್ಮದ್ ಕೇಟರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರಿ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ಯ 1896ನೇ ಇಸವಿ ಅಕ್ಟೋಬರ್ ತಿಂಗಳ 19ನೇ ತಾರೀಖಿನಲ್ಲಿ ಕೋರ್ಟ್ ಮೊಹರ್‌ನಿಂದ ನಮ್ಮ ಸಹಿತೊಡನೆ ಕೊಡೋಣಾಗಿದೆ.

ಎಂ. ರಾಮಸ್ವಾಮಯ್ಯರ್,
ಡಿಸ್ಟ್ರಿಕ್ಟ್ ಜಡ್ಜ್.